# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು-24**

**ಸಂಖ್ಯೆ: ಸ.ಅ/ವಾ-21/ಪಿ.ಆರ್/17/2021-22** **ದಿನಾಂಕ:17-09-2021**

## ::ವಾರ್ಡ್ ಸಮಿತಿ ಸಭೆಯ ನಡವಳಿಗಳು::

ವಿಷಯ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 4-09-2021 ರಂದು ವಾರ್ಡ್ ನಂ:21 ಹೆಬ್ಬಾಳದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಂ.ವೆಂಕಟಾಚಲಪತಿ (ಜಂಟಿ ಆಯುಕ್ತರು ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಮುಕೇಶ್.ಎಸ್.ಬಿರಾದಾರ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ನಂ. 21 |
| 3. | ಶ್ರೀಮಂಜುನಾಥ್ . | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) |
| 4. | ಶ್ರೀಮತಿ ಉಷಾರಾಣಿ | ಹಿರಿಯ ಆರೋಗ್ಯ ಪರಿವೀಕ್ಷಕರು. (ವಾರ್ಡ್ ಸಂಖ್ಯೆ.21) |
| 5. | ಶ್ರೀ ವಿವೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6. | ಶ್ರೀ. ರಾಮಣ್ಣ | ಕಂದಾಯ ಪರಿವೀಕ್ಷಕರು |
| 7. | ಶ್ರೀ. ಪ್ರಕಾಶ್ ಎಂ.ಎಸ್ | ಕಾರ್ಯದರ್ಶಿಗಳು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, 1ನೇ ಬ್ಲಾಕ್. |
| 8. | ಶ್ರೀ ಕ್ಯಾಪ್ಟನ್ ರಾಮಚಂದ್ರ | ಅಧ್ಯಕ್ಷರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ |
| 9. | ಶ್ರೀ. ವೀರ ಶೇಖರ್ | ಕಾರ್ಯದರ್ಶಿ, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, |
| 10. | ಶ್ರೀ.ಗೋಪಿನಾಥ್ ರಾವ್ | ಸ್ಥಳೀಯ ನಿವಾಸಿ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ, ಶ್ರೀ. ಎಂ. ವೆಂಕಟಾಚಲಪತಿ ಮತ್ತು ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಮುಕೇಶ್. ಎಸ್. ಬಿರಾದಾರ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಈ ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ ವ್ಯಾಪ್ತಿಯಲ್ಲಿ ಕತ್ತರಿಸಿ ಹಾಕಿರುವ ಮರದ ಕೊಂಬೆಗಳನ್ನು ತೆರವುಗೊಳಿಸಲು ಘನತ್ಯಾಜ್ಯ ವಿಭಾಗಕ್ಕೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಕೂಡಲೇ ದುರಸ್ತಿಪಡಿಸಲು ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
3. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸಮಯಕ್ಕೆ ಸರಿಯಾಗಿ ಸರಬರಾಜು ಆಗುತ್ತಿಲ್ಲವೆಂದು ಸಾರ್ವಜನಿಕರು ದೂರನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಸಮಯಕ್ಕೆ ಸರಿಯಾಗಿ ನೀರನ್ನು ಸರಬರಾಜು ಮಾಡಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸೂಚಿಸಲಾಯಿತು.

4. ಆನಂದ ನಗರದ ಮುಖ್ಯರಸ್ತೆಯ ಪಾದಚಾರಿ ಮಾರ್ಗವನ್ನು ದುರಸ್ಥಿಪಡಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

5. ಆನಂದನಗರ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉದ್ಯಾನವನಗಳನ್ನು ಸ್ವಚ್ಛಗೊಳಿಸುವಂತೆ ಕ್ರಮಕೈಗೊಳ್ಳಲು ಘನತ್ಯಾಜ್ಯ ವಿಭಾಗದವರಿಗೆ ಸೂಚಿಸಲಾಯಿತು.

6. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆಯು ಸರಿಯಾದ ಕ್ರಮದಲ್ಲಿ ಆಗುತ್ತಿಲ್ಲವೆಂದು ಸಾರ್ವಜನಿಕರು ಹಿಂದಿನ ಸಭೆಯಲ್ಲಿ ದೂರನ್ನು ಸಲ್ಲಿಸಿರುವುದರ ಮೇರೆಗೆ ಬೀದಿ ದೀಪಗಳನ್ನು ಸಮಯಕ್ಕೆ ಸರಿಯಾಗಿ ನಿರ್ವಹಣೆ ಮಾಡಬೇಕೆಂದು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

7. ವಾರ್ಡ್‌ನ ಎಲ್ಲಾ ಸಾರ್ವಜನಿಕರು ಕೋವಿಡ್-19 ಲಸಿಕೆಯನ್ನು ಪ್ರತಿಯೊಬ್ಬರು ಹಾಕಿಸಿಕೊಳ್ಳುವಂತೆ ಜಾಗೃತಿ ಮೂಡಿಸಲು ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿಗಳು**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ: 21, ಹೆಬ್ಬಾಳ**

**ಅಧ್ಯಕ್ಷರು**
**ಹಾಗೂ ನೋಡಲ್ ಅಧಿಕಾರಿಗಳು**
**ವಾರ್ಡ್ ನಂ: 21, ಹೆಬ್ಬಾಳ**

ಪ್ರತಿಯನ್ನು:

1. ಮಾನ್ಯ ಆಡಳಿತಗಾರರು, ಬಿಬಿಎಂಪಿ ರವರ ಆಪ್ತ ಕಾರ್ಯಾಲಯಕ್ಕೆ ಕಳುಹಿಸುತ್ತಾ, ಆಡಳಿತಗಾರರ ಅವಗಾಹನೆಗೆ ತರಲು ಕೋರಿದೆ.
2. ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಆಪ್ತ ಕಾರ್ಯಾಲಯಕ್ಕೆ ಕಳುಹಿಸುತ್ತಾ, ಆಯುಕ್ತರ ಅವಗಾಹನೆಗೆ ತರಲು ಕೋರಿದೆ.
3. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
5. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು (ಹೆಬ್ಬಾಳ) ವಿಭಾಗ ರವರ ಮಾಹಿತಿಗಾಗಿ.
7. ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
9. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
10. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಪ್ರತಿ.